## ಕರ್ನಾಟಕ ವಿಧಾನ ಪರಿಷತ್ತು

01. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 562

02. ಸದಸ್ಯರ ಹೆಸರು : ಡಾ॥ ಕೆ.ಗೋವಿಂದರಾಜ್
(ವಿಧಾನಸಭೆಯಿಂದ ಚುನಾಯಿತರಾದವರು)

03. ಉತ್ತರಿಸುವ ದಿನಾಂಕ : 20.02.2023

04. ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಇತ್ತೀಚೆಗೆ ಬೆಂಗಳೂರಿನ ಹೆಚ್.ಎಸ್.ಆರ್ ಲೇಔಟ್‌ನಲ್ಲಿ ರಾತ್ರಿ ಪಾಳಿ ಕೆಲಸ ಮುಗಿಸಿ ಮನೆಗೆ ಬರುತ್ತಿದ್ದ ಖಾಸಗಿ ಕಂಪನಿ ಉದ್ಯೋಗಿಯನ್ನು ಇಬ್ಬರು ಗಸ್ತು ಪೊಲೀಸರು ಮಾರ್ಗ ಮಧ್ಯೆ ತಡೆದು ಆತನನ್ನು ಬೆದರಿಸಿ 2,500/- ರೂಪಾಯಿ ಸುಲಿಗೆ ಮಾಡಿದ ಗಂಭೀರ ಆರೋಪದ ಬಗ್ಗೆ ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಘಟನೆಯ ಸಂಬಂಧ ಪ್ರಕರಣ ವರದಿಯಾದ ಕೂಡಲೇ ಬಂಡೇಪಾಳ್ಯ ಪೊಲೀಸ್ ಠಾಣೆಯ ಅಧಿಕಾರಿಗಳಿಂದ ವರದಿ ಪಡೆದು ಬಂಡೇಪಾಳ್ಯ ಪೊಲೀಸ್ ಠಾಣೆಯ ಇಬ್ಬರು ಸಿಬ್ಬಂದಿಗಳನ್ನು ಸೇವೆಯಿಂದ ಅಮಾನತ್ತುಗೊಳಿಸಿ ಸದರಿಯವರ ವಿರುದ್ಧ ಇಲಾಖಾ ಶಿಸ್ತು ಕ್ರಮ ಕೈಗೊಳ್ಳಲಾಗಿದೆ. |
| ಆ) | ಬಂದಿದ್ದಲ್ಲಿ, ಇಂತಹದ್ದನ್ನು ತಡೆಗಟ್ಟಿ ಸಾರ್ವಜನಿಕರಿಗೆ ಧೈರ್ಯ ಹಾಗೂ ಭರವಸೆ ಮೂಡಿಸಲು ಸರ್ಕಾರ ಕ್ರಮವಹಿಸಲಾಗುವುದೇ: | ಅಶಿಸ್ತು / ಕಾನೂನು ಬಾಹಿರ ಚಟುವಟಿಕೆಗಳ ವಿರುದ್ಧ ಇಲಾಖೆಯು ಶೂನ್ಯ ಸಹಿಷ್ಣುತೆಯನ್ನು ಹೊಂದಿದ್ದು, ಅಕ್ರಮ ಚಟುವಟಿಕೆಗಳಲ್ಲಿ ಭಾಗಿಯಾಗದಂತೆ ನೋಡಿಕೊಳ್ಳಲು ಠಾಣಾಧಿಕಾರಿಗಳಿಗೆ ಜವಬ್ದಾರಿಯನ್ನು ನೀಡಲಾಗಿದ್ದು, ಜನಸ್ನೇಹಿ ಪೊಲೀಸ್ ವ್ಯವಸ್ಥೆಗೆ ಹೆಚ್ಚು ಒತ್ತು ನೀಡಲಾಗಿರುತ್ತದೆ. |
| ಇ) | ಕೆಲವೇ ಕೆಲವು ಪೊಲೀಸರು ಇಂತಹ ಕೆಲಸದಲ್ಲಿ ಭಾಗಿಯಾಗಿರುವುದರಿಂದ ಇಡೀ ಪೊಲೀಸ್ ಇಲಾಖೆಗೆ ಅಪಖ್ಯಾತಿ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಇದನ್ನು ತಡೆಗಟ್ಟಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು? | ಕೆಲವು ಪೊಲೀಸರ ಇಂತಹ ಅನುಚಿತ ವರ್ತನೆಗಳು ಕಂಡು ಬಂದಲ್ಲಿ, ಸಕಾಲದಲ್ಲಿ ನಿರ್ಧಾಕ್ಷಿಣವಾಗಿ ಇಲಾಖಾ ಶಿಸ್ತು ಕ್ರಮ / ಕ್ರಿಮಿನಲ್ ಪ್ರಕರಣಗಳನ್ನು ದಾಖಲಿಸಿ, ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ.<br>ಬೆಂಗಳೂರು ನಗರದ ಕೆಲವೊಂದು ಪೊಲೀಸ್ ಠಾಣೆ ಮತ್ತು ಕಛೇರಿಯಲ್ಲಿ ಪ್ರಯೋಗಿಕವಾಗಿ ಪೊಲೀಸ್ ವ್ಯವಸ್ಥೆಯ ಬಗ್ಗೆ ಸಾರ್ವಜನಿಕರ ಪ್ರತಿಕ್ರಿಯೆ ಬಗ್ಗೆ ಕ್ಯೂಆರ್ ಕೋಡ್ ಮೂಲಕ ಮಾಹಿತಿ ಸಂಗ್ರಹಿಸಲಾಗುತ್ತಿದೆ. |

**HD/41/PPS/2023**

(ಆರಗ ಜ್ಞಾನೇಂದ್ರ)
ಗೃಹ ಸಚಿವರು